ಕರ್ನಾಟಕ ವಿಧಾನಸಭೆ

ಸೋಮವಾರ 14ನೇ ಜೂನ್ 2004ರಂದು

ಸದನವು ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ 11.10 ಗಂಟೆಗೆ ಸಮಾವೇಶಗೊಂಡಿತು

ಅಧ್ಯಕ್ಷರು: (ಶ್ರೀ ಕೃಷ್ಣರವರು) ಪೀಠವನ್ನು ಅಲಂಕರಿಸಿದ್ದರು

1) ಈಗ ಪ್ರಮಾಣ ವಚನ ಸ್ವೀಕಾರ:

(ಅ) ಶ್ರೀ ಡಿ. ನಾಗರಾಜಯ್ಯ (ಹುಲಿಯೂರುದುರ್ಗ):– "ಡಿ. ನಾಗರಾಜಯ್ಯ ಎಂಬ ಹೆಸರಿನವನಾದ ನಾನು ವಿಧಾನ ಸಭೆಯ ಸದಸ್ಯನಾಗಿ ನಿರ್ವಾಚನ ಹೊಂದಿದವನಾಗಿ ವಿಧಿದ್ವಾರಾ ಸ್ಥಾಪಿತವಾದ ಭಾರತದ ಸಂವಿಧಾನದ ವಿಷಯದಲ್ಲಿ ಶ್ರದ್ಧೆಯಿಂದಲೂ, ನಿಷ್ಠೆಯಿಂದಲೂ ಕೂಡಿರುತ್ತೇನೆಂದೂ, ನಾನು ಭಾರತದ ಪರಮಾಧಿಕಾರವನ್ನು ಮತ್ತು ಸಮಗ್ರತೆಯನ್ನು ಸಮರ್ಥಿಸುತ್ತೇನೆಂದೂ, ನಾನು ಈಗ ಕೈಗೊಳ್ಳಲಿರುವ ಕರ್ತವ್ಯವನ್ನು ಶ್ರದ್ಧಾಪೂರ್ವಕವಾಗಿ ನಿರ್ವಹಿಸುತ್ತೇನೆಂದೂ ಭಗವಂತನ ಹೆಸರಿನ ಮೇಲೆ ಪ್ರಮಾಣ ಮಾಡುತ್ತೇನೆ."

(ಆ) ಶ್ರೀಮತಿ ವಿಜಯಲಕ್ಷ್ಮಮ್ಮ ಬಂಡಿಸಿದ್ದೇಗೌಡ (ಶ್ರೀರಂಗಪಟ್ಟಣ):– "ವಿಜಯ ಲಕ್ಷ್ಮಮ್ಮ ಎಂಬ ಹೆಸರಿನವಳಾದ ನಾನು ವಿಧಾನ ಸಭೆಯ ಸದಸ್ಯಳಾಗಿ ನಿರ್ವಾಚನ ಹೊಂದಿದವಳಾಗಿ ವಿಧಿದ್ವಾರಾ ಸ್ಥಾಪಿತವಾದ ಭಾರತದ ಸಂವಿಧಾನದ ವಿಷಯದಲ್ಲಿ ಶ್ರದ್ಧೆಯಿಂದಲೂ, ನಿಷ್ಠೆಯಿಂದಲೂ ಕೂಡಿರುತ್ತೇನೆಂದೂ, ನಾನು ಭಾರತದ ಪರಮಾಧಿಕಾರವನ್ನು ಮತ್ತು ಸಮಗ್ರತೆಯನ್ನು ಸಮರ್ಥಿಸುತ್ತೇನೆಂದೂ, ನಾನು ಈಗ ಕೈಗೊಳ್ಳಲಿರುವ ಕರ್ತವ್ಯವನ್ನು ಶ್ರದ್ಧಾಪೂರ್ವಕವಾಗಿ ನಿರ್ವಹಿಸುತ್ತೇನೆಂದೂ ಭಗವಂತನ ಹೆಸರಿನ ಮೇಲೆ ಪ್ರಮಾಣ ಮಾಡುತ್ತೇನೆ ಹಾಗೂ ಸತ್ಯ ನಿಷ್ಠೆಯಿಂದ ಪ್ರತಿಜ್ಞೆ ಮಾಡುತ್ತೇನೆ."

2. ಸಂತಾಪ ಸೂಚನೆಗಳು

ಅಧ್ಯಕ್ಷರು:– ವಿಧಾನ ಸಭೆಯ ಮಾಜಿ ಸದಸ್ಯರು ಹಾಗೂ ಮಾಜಿ ಸಚಿವರಾಗಿದ್ದ ಶ್ರೀ ಜಿ. ರಾಜುಗೌಡ, ಶ್ರೀ ಡಿ.ಬಿ. ಕಲ್ಮಣ್‌ಕರ್, ಶ್ರೀ ಪಿ. ವೆಂಕಟರಮಣ ಮತ್ತು ಮಾಜಿ ಸದಸ್ಯರಾದ ಶ್ರೀ ಎನ್. ಗಂಗಾಧರ್ ಅವರುಗಳು ನಿಧನರಾಗಿರುವುದನ್ನು ವಿಷಾದದಿಂದ ಸದನಕ್ಕೆ ತಿಳಿಸ ಬಯಸುತ್ತೇನೆ.

1. ಶ್ರೀ ಜಿ. ರಾಜುಗೌಡ

ವಿಧಾನಸಭೆಯ ಮಾಜಿ ಸದಸ್ಯರು ಹಾಗೂ ಮಾಜಿ ಸಚಿವರಾಗಿದ್ದ ಶ್ರೀ ಜಿ. ರಾಜುಗೌಡ ಅವರು ದಿನಾಂಕ 16ನೇ ಮೇ, 1932ರಲ್ಲಿ ದೊಡ್ಡಿಂದುವಾಡಿ ಗ್ರಾಮದಲ್ಲಿ ಜನಿಸಿದರು. ವೃತ್ತಿಯಲ್ಲಿ ಕೃಷಿಕರಾದ ಶ್ರೀಯುತರು ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ, ತಾಲ್ಲೂಕು ಬೋರ್ಡ್ ಸದಸ್ಯರಾಗಿ, ಪಿ.ಎಲ್.ಡಿ. ಬ್ಯಾಂಕ್‌ನ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು. ಅತ್ಯುತ್ತಮ ಆಡಳಿತಗಾರರಾಗಿದ್ದ ಶ್ರೀಯುತರು 1968ರಲ್ಲಿ ಅಂದಿನ ಪ್ರಧಾನ ಮಂತ್ರಿ ಇಂದಿರಾಗಾಂಧಿ ಅವರಿಂದ "ಅತ್ಯುತ್ತಮ ಮಂಡಳಿ ಪಂಚಾಯಿತಿ ಪ್ರಧಾನ" ಎಂಬ ಪ್ರಶಸ್ತಿಯನ್ನು ಪಡೆದುಕೊಂಡಿದ್ದರು. ಶ್ರೀಯುತರು 6ನೇ, 8ನೇ, 9ನೇ ಹಾಗೂ 11ನೇ ವಿಧಾನ ಸಭೆಗಳಿಗೆ ಹನೂರು ಕ್ಷೇತ್ರದಿಂದ ಚುನಾಯಿತರಾಗಿದ್ದರು ಹಾಗೂ 11ನೇ ವಿಧಾನ